GOVERNMENT OF KARNATAKA
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ - 590002
OFFICE OF THE DEPUTY COMMISSIONER & DISTRICT MAGISTRATE BELAGAVI - 590002
ದೂರವಾಣಿ : 0831-2406324 Email: deo.belagavi@gmail.com

ಕ್ರ: ಡಿವಿಎಸ್/ಎಂಎಜಿ/ಎಡಿಎಂ/ವಿವ-01/2020-21 ದಿನಾಂಕ:22-09-2021

## ಅಧಿಕೃತ ಜ್ಞಾಪನಾ

ವಿಷಯ:- ಕೋವಿಡ್-19 (ಕರೋನಾ) ವೈರಾಣುವಿನ ಹರಡುವಿಕೆಯನ್ನು ನಿಯಂತ್ರಿಸಲು ಹಾಗೂ ಸಾರ್ವಜನಿಕರ ಮತ್ತು ಭಕ್ತಾಧಿಗಳ ಆರೋಗ್ಯ ಕಾಪಾಡುವುದಕ್ಕೆ ಸಂಬಂಧಿಸಿ ಮುಂಜಾಗ್ರತಾ ಕ್ರಮವಾಗಿ ಸಾರ್ವಜನಿಕ ಭಕ್ತಾಧಿಗಳಿಗೆ ನಿಷೇಧಿಸಲಾಗಿದ್ದ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಯಲ್ಲಮ್ಮನಗುಡ್ಡದ ಶ್ರೀ ರೇಣುಕಾ ಯಲ್ಲಮ್ಮಾ ದೇವಸ್ಥಾನದ ದರ್ಶನವನ್ನು ಮುಕ್ತಗೊಳಿಸುವ ಕುರಿತು.

ಉಲ್ಲೇಖ:-
1. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಧ್ಯಕ್ಷರು ರಾಜ್ಯ ವಿಪತ್ತು ನಿರ್ವಹಣಾ ಸಮಿತಿ ಬೆಂಗಳೂರು ರವರ ಆದೇಶ ಸಂಖ್ಯೆ: ಕಂಇ 158 ಟಿಎನ್ಆರ್ 2020, ದಿನಾಂಕ: 03.07.2021 ಮತ್ತು ದಿನಾಂಕ:09.09.2021.
2. ವಿಪತ್ತು ನಿರ್ವಹಣಾ ಕಾಯ್ದೆ 2005, "The Karnataka Epidemic Diseases, COVID-19 Regulations, 2020 " ಹಾಗೂ ಸಿ.ಆರ್.ಪಿ.ಸಿ. 1973 ಕಲಂ 144ರ
3. ಈ ಕಾರ್ಯಾಲಯದ ಸಮ ಸಂಖ್ಯೆ ಆದೇಶ ದಿನಾಂಕ:04.07.2021, 06.07.2021 ಮತ್ತು ದಿನಾಂಕ:19.07.2021.
4. ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ ಬೆಂಗಳುರು ರವರ ಸುತ್ತೋಲೆ ಸಂಖ್ಯೆ: ಎಡಿಎಂ 11/ಸಿಆರ್-284/2019-20, ದಿನಾಂಕ: 06.07.2021.
5. ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕ ಭಕ್ತಾಧಿಗಳ ಮನವಿ ದಿನಾಂಕ: 23.08.2021 ಹಾಗೂ 26.08.2021.
6. ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ರೇಣುಕಾ ಯಲ್ಲಮ್ಮಾ ದೇವಸ್ಥಾನ ಯಲ್ಲಮ್ಮನುಡ್ಡ ತಾಲ್ಲೂಕು ಸವದತ್ತಿ ರವರ ವರದಿ ಸಂಖ್ಯೆ:ಡಿವಿಎಸ್/ಆಡಳಿತ/ಸಿಆರ್-7/18-19 ದಿನಾಂಕ:03.07.2021.

******

ಪ್ರಸ್ತಾವನೆ:-

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19 (ಕರೋನಾ) ವೈರಾಣುವಿನ ಹರಡುವಿಕೆಯು ನೆರೆಯ ರಾಜ್ಯವಾದ ಮಹಾರಾಷ್ಟ್ರದಲ್ಲಿ ತೀವ್ರತರವಾಗಿ ಹರಡುತ್ತಿರುವುದರಿಂದ, ಮಹಾರಾಷ್ಟ್ರ ರಾಜ್ಯದ ಗಡಿ ಜಿಲ್ಲೆಯಾದ ಬೆಳಗಾವಿಯ ಹಲವಾರು ಪ್ರಮುಖ ಧಾರ್ಮಿಕ ಕೇಂದ್ರಗಳಿಗೆ, ಮಹಾರಾಷ್ಟ್ರ ರಾಜ್ಯದಿಂದ ಅತ್ಯಂತ ಗಣನೀಯ ಸಂಖ್ಯೆಯಲ್ಲಿ ಸಾರ್ವಜನಿಕರು ಹಾಗೂ ಭಕ್ತಾಧಿಗಳು ಬೆಳಗಾವಿ ಜಿಲ್ಲೆಗೆ ಆಗಮಿಸುತ್ತಿರುವುದರಿಂದ ವೈರಾಣುವಿನ ಹರಡುವಿಕೆಯನ್ನು ಸಾರ್ವಜನಿಕರ ಹಾಗೂ ಭಕ್ತಾಧಿಗಳ ಆರೋಗ್ಯದ ಹಿತದೃಷ್ಟಿಯಿಂದ ಪರಿಣಾಮಕಾರಿಯಾಗಿ ನಿಯಂತ್ರಿಸುವುದು ಅತ್ಯಂತ ಅವಶ್ಯವಾಗಿದ್ದ ಹಿನ್ನಲೆಯಲ್ಲಿ ಉಲ್ಲೇಖ (3)ರ ಈ ಕಾರ್ಯಾಲಯದ ಆದೇಶದನ್ವಯ ಸವದತ್ತಿ ತಾಲ್ಲೂಕಿನ ಯಲ್ಲಮ್ಮನಗುಡ್ಡದ ಶ್ರೀ ರೇಣುಕಾ ಯಲ್ಲಮ್ಮಾ ದೇವಸ್ಥಾನವನ್ನು ಸಾರ್ವಜನಿಕ ಭಕ್ತಾಧಿಗಳ ದರ್ಶನಕ್ಕೆ ಮುಂದಿನ ಆದೇಶದ ವರೆಗೆ ನಿರ್ಬಂಧಿಸಿ ಆದೇಶಿಸಲಾಗಿತ್ತು.

ಪ್ರಸ್ತುತ ಉಲ್ಲೇಖ (4)ರ ಮಾನ್ಯ ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ ಬೆಂಗಳೂರು ರವರ ಸುತ್ತೋಲೆಯಲ್ಲಿ ರಾಜ್ಯದ ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಗೊಳಪಡುವ ಧಾರ್ಮಿಕ ದೇವಸ್ಥಾನಗಳಲ್ಲಿ ಕಡ್ಡಾಯ ಸಾಮಾಜಿಕ ಅಂತರ, ಅಗತ್ಯ ಕೋವಿಡ್ ನಿಯಂತ್ರಣ ಮುಂಜಾಗರುಕತೆ ಕ್ರಮಗಳನ್ನು ಕೈಗೊಂಡು ಭಕ್ತಾಧಿಗಳಿಗೆ ದೇವಾಲಯ ಪ್ರವೇಶ, ದೇವರ ದರ್ಶನ, ಮತ್ತು ಆರತಿ ಸೇವೆಗೆ ಸೀಮಿತಗೊಳಿಸಿ, ಸರ್ಕಾರ/ರಾಜ್ಯ ಸರ್ಕಾರ ಮತ್ತು ಆಯಾಯಾ ಜಿಲ್ಲಾಧಿಕಾರಿಗಳು ಹೊರಡಿಸಿರುವ/ ಹೊರಡಿಸಲಿರುವ ಆದೇಶ/ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವ ಷರತ್ತುಗಳಿಗೊಳಪಟ್ಟು ದೇವಾಲಯ ತೆರೆಯುವ ಬಗ್ಗೆ ಸುತ್ತೋಲೆ ಹೊರಡಿಸಿರುತ್ತಾರೆ.

2...

Scanned by CamScanner

ಬೆಳಗಾವಿ ಜಿಲ್ಲೆಗೆ ಸಂಬಂಧಿಸಿದಂತೆ, ಈ ಬಗ್ಗೆ ಹಲವಾರು ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕ ಭಕ್ತಾಧಿಗಳು ಈ ಮೇಲಿನ ದೇವಾಲಯಗಳನ್ನು ಸಾರ್ವಜನಿಕರ ದರ್ಶನಕ್ಕೆ ಮುಕ್ತಗೊಳಿಸುವ ಬಗ್ಗೆ ಮನವಿಗಳನ್ನು ಸಲ್ಲಿಸುತ್ತಿದ್ದಾರೆ.

ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ರೇಣುಕಾ ಯಲ್ಲಮ್ಮಾ ದೇವಸ್ಥಾನ ಯಲ್ಲಮ್ಮನುಡ್ಡ ತಾಲ್ಲೂಕು ಸವದತ್ತಿ ರವರು ಉಲ್ಲೇಖ (6)ರಂತೆ ವರದಿ ಸಲ್ಲಿಸಿ ಶ್ರೀ ದೇವಾಲಯವು ಕಳೆದ 17 ತಿಂಗಳುಗಳಿಂದ ಭಕ್ತಾಧಿಗಳ ದರ್ಶನಕ್ಕೆ ನಿರ್ಬಂಧವಿರುವುದರಿಂದ ದೇವಾಲಯದ ವಾರ್ಷಿಕ ಆದಾಯದಲ್ಲಿ ಗಣನೀಯಮ ಮಟ್ಟದ ಇಳಿಕೆಯಾಗಿದ್ದು, ದೇವಿಯ ದರ್ಶನಕ್ಕೆ ಬರತಕ್ಕಂತಹ ಭಕ್ತಾಧಿಗಳಿಗೆ ಸಂಪೂರ್ಣ ಕೋವಿಡ್ ಮಾರ್ಗಸೂಚಿಗಳ ಪಾಲನೆಯೊಂದಿಗೆ ದರ್ಶನಕ್ಕೆ ಅವಕಾಶ ಕಲ್ಪಿಸಲು ಕೋರಿರುತ್ತಾರೆ.

ಪ್ರಸ್ತುತ ಬೆಳಗಾವಿ ಜಿಲ್ಲೆಯಲ್ಲಿ ಕೋವಿಡ್ ವೈರಾಣುವಿನ ಹರಡುವಿಕೆಯು ನಿಯಂತ್ರಣದಲ್ಲಿದ್ದು, ಭಾಗಶಃ ಸಾರ್ವಜನಿಕರಿಗೆ ಕೋವಿಡ್ ಲಸಿಕೆ ವಿತರಿಸಲಾಗಿದ್ದು, ಈ ಮೇಲೆ ವಿವರಿಸಿದ ಅಂಶಗಳನ್ನು ಪರಿಗಣಿಸಿ ಶ್ರೀ ರೇಣುಕಾ ಯೆಲ್ಲಮ್ಮಾ ದೇವಸ್ಥಾನ ಯಲ್ಲಮ್ಮನಗುಡ್ಡ ತಾಲ್ಲೂಕು ಸವದತ್ತಿಯ ಸಾರ್ವಜನಿಕ ದರ್ಶನಕ್ಕೆ ಅವಕಾಶ ಕಲ್ಪಿಸುವ ಬಗ್ಗೆ ಈ ಕೆಳಗಿನಂತೆ ಆದೇಶ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಪ್ರಸ್ತುತ ಜಿಲ್ಲೆಯಲ್ಲಿ ಈವರೆಗೂ ಜಿಲ್ಲೆಯ ಜನರ ಸಹಕಾರ ಹಾಗೂ ಸರ್ಕಾರದ ಮಾರ್ಗಸೂಚಿಗಳ ಪಾಲನೆಯಿಂದಾಗಿ ವೈರಾಣುವಿನ ಹರಡುವಿಕೆಯು ಹತೋಟಿಗೆ ಬರುತ್ತಿರುವುದರಿಂದ, ಹಾಗೂ ಕರ್ನಾಟಕ ರಾಜ್ಯದ ಎಲ್ಲಾ ಪ್ರಮುಖ ದೇವಾಲಯಗಳು, ಚರ್ಚಗಳು, ಮಸೀದಿಗಳು, ಎಲ್ಲಾ ಶ್ರದ್ಧಾ ಭಕ್ತಿ ಕೇಂದ್ರಗಳು ಸಾರ್ವಜನಿಕ ದರ್ಶನಕ್ಕೆ ಮುಕ್ತಗೊಂಡಿರುವುದನ್ನು ಮತ್ತು ಜಿಲ್ಲೆಯ ಹಲವಾರು ಜನಪ್ರತಿನಿಧಿಗಳ ಹಾಗೂ ಸಾರ್ವಜನಿಕ ಭಕ್ತಾಧಿಗಳ ಮನವಿಗಳನ್ನು ಮತ್ತು ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ರೇಣುಕಾ ಯಲ್ಲಮ್ಮಾ ದೇವಸ್ಥಾನ ಯಲ್ಲಮ್ಮನುಡ್ಡ ತಾಲ್ಲೂಕು ಸವದತ್ತಿ ರವರ ವರದಿಯನ್ನು ಪರಿಗಣಿಸಿ ಶ್ರೀ ರೇಣುಕಾ ಯೆಲ್ಲಮ್ಮಾ ದೇವಸ್ಥಾನ ಯಲ್ಲಮ್ಮನಗುಡ್ಡ ತಾಲ್ಲೂಕು ಸವದತ್ತಿಯ ಸಾರ್ವಜನಿಕ ದರ್ಶನವನ್ನು ದಿನಾಂಕ:28.09.2021 (ಮಂಗಳವಾರ) ರಿಂದ ಅನ್ವಯವಾಗುವಂತೆ ಶ್ರೀ ದೇವಿಯ ಎಲ್ಲಾ ಸೇವೆಗಳನ್ನು ಹೊರತುಪಡಿಸಿ ದರ್ಶನಕ್ಕೆ ಮಾತ್ರ ಅವಕಾಶ ಕಲ್ಪಿಸಿ, ಈ ಕೆಳಗಿನ ಷರತ್ತಿಗೊಳಪಟ್ಟು ಮುಕ್ತಗೊಳಿಸಿದೆ.

**: ಷರತ್ತುಗಳು :**

1. ಶ್ರೀ ದೇವಿಯ ದರ್ಶನ ಅನುಮತಿ ಆದೇಶವು ದಿನಾಂಕ:28.9.2021 ರಿಂದ ಅನ್ವಯವಾಗತಕ್ಕದ್ದು.
2. ಶ್ರೀ ದೇವಾಲಯದಲ್ಲಿ ಜನಸಂದಣಿ ಸೇರುವಂತಹ ಎಲ್ಲಾ ಸೇವೆ, ವಿಶೇಷ ಉತ್ಸವ, ಜಾತ್ರೆ ಕಾರ್ಯಕ್ರಮಗಳನ್ನು ಮುಂದಿನ ಆದೇಶದವರೆಗೆ ನಿರ್ಬಂಧಿಸಲಾಗಿದೆ.
3. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರ ರವರ ಸುತ್ತೋಲೆ ಸಂಖ್ಯೆ: ಎಡಿಎಂ11/ ಸಿಆರ್–284/2019–20 ದಿನಾಂಕ:01–09–2020ರ ಕ್ರಸಂ.(2)ರ ಷರತ್ತಿನಲ್ಲಿ ಈ ಕೆಳಕಂಡಂತೆ ಸೂಚಿಸಿರುತ್ತಾರೆ.

   *"ಜಾತ್ರಾ ಉತ್ಸವ /ಬ್ರಹ್ಮ ರಥೋತ್ಸವ ಮುಂತಾದ ವಿಶೇಷ ಉತ್ಸವಗಳನ್ನು ದೇವಾಲಯದ ಆಗಮಿಕರು/ ತಂತ್ರಿಗಳು/ ಅರ್ಚಕರು/ ದೇವಾಲಯದ ಸಿಬ್ಬಂಧಿಗಳು ಸಾಂಕೇತಿಕವಾಗಿ ಹೋಮಾಧಿಗಳು, ಪ್ರಾಯಶ್ಚಿತ್ತಾಧಿಗಳನ್ನು ನಡೆಸಿ ಕೇವಲ ಉತ್ಸವಗಳನ್ನು ದೇವಾಲಯದ ಆವರಣ / ಒಳಪ್ರಾಕಾರದೊಳಗೆ ಉತ್ಸವ ದಿನಗಳಲ್ಲಿ/ ಸಾರ್ವಜನಿಕರ ಸಂದಣಿ ಇಲ್ಲದಂತೆ ನಡೆಸಿ ಪೂರ್ಣಗೊಳಿಸುವುದು."* ಅದರಂತೆ, ಶ್ರೀ ದೇವಾಲಯದ ಎಲ್ಲ ಪ್ರಮುಖ ಉತ್ಸವ/ ಜಾತ್ರೆಗಳನ್ನು ಮುಂದಿನ ಆದೇಶದವರೆಗೆ ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಿ ಪೂರ್ಣಗೊಳಿಸತಕ್ಕದ್ದು.

4. ಶ್ರೀ ದೇವಿಯ ದರ್ಶನಕ್ಕೆ ಆಗಮಿಸುವ ಸಾರ್ವಜನಿಕ ಭಕ್ತಾದಿಗಳಿಗೆ ಸಾಮಾಜಿಕ ಅಂತರದೊಂದಿಗೆ ಸರತಿ ಸಾಲಿನಲ್ಲಿ ಸರಾಗವಾಗಿ ಸಾಗಲು ವ್ಯವಸ್ಥೆ ಕಲ್ಪಿಸತಕ್ಕದ್ದು. ಹಾಗೂ ಇನ್ನಿತರೆ ಎಲ್ಲ ಅಗತ್ಯ ಮೂಲಭೂತ ವ್ಯವಸ್ಥೆಗಳನ್ನು ಕಲ್ಪಿಸತಕ್ಕದ್ದು.
5. ಸರ್ಕಾರದ ಮಾರ್ಗಸೂಚಿಯಲ್ಲಿ ಅತ್ಯಂತ ಪ್ರಮುಖವಾಗಿ ವಿಧಿಸಿದ ಸಾರ್ವಜನಿಕರ ಸಾಮಾಜಿಕ ಅಂತರ ಕಾಯ್ದುಕೊಳ್ಳುವಿಕೆಯ ಕಟ್ಟುನಿಟ್ಟಿನ ಪಾಲನೆ, ಮುಖಗವಸು ಧರಿಸುವಿಕೆ, ಥರ್ಮಲ್ ಸ್ಕ್ಯಾನಿಂಗ್ ಮತ್ತು ಕೈ ತೊಳಿಯುವಿಕೆ ಅಥವಾ ಸ್ಯಾನಿಟೈಜರ್ ವ್ಯವಸ್ಥೆಯನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ಶ್ರೀ ದೇವಾಲಯದ ಪ್ರಾಂಗಣ ಪ್ರವೇಶ ಪೂರ್ವದಲ್ಲಿ ಸಾರ್ವಜನಿಕರ/ ಭಕ್ತಾಧಿಗಳ ದೇಹದ ಉಷ್ಣಾಂಶ ಪರಿಶೀಲಿಸಿ, ದೇಹದ ಉಷ್ಣಾಂಶ ಸುಸ್ಥಿತಿಯಲ್ಲಿರುವವರಿಗೆ ದರ್ಶನಕ್ಕೆ ಅವಕಾಶ ಕಲ್ಪಿಸತಕ್ಕದ್ದು.
7. ದಿನನಿತ್ಯ ಸಾರ್ವಜನಿಕ ಭಕ್ತಾಧಿಗಳ ಜನಜಂಗುಳಿಗೆ ಅವಕಾಶ ಕಲ್ಪಿಸತಕ್ಕದಲ್ಲ.
8. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕೋವಿಡ್–19 ನಿಯಂತ್ರಣಕ್ಕಾಗಿ ಹೊರಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

Scanned by CamScanner

9. ಕೋವಿಡ್-19 (ಕರೋನಾ) ವೈರಾಣುವಿನ ಹರಡುವಿಕೆಯನ್ನು ನಿಯಂತ್ರಿಸಲು ಹೊರಡಿಸಿರುವ ಸರ್ಕಾರದ ಮಾರ್ಗಸೂಚಿಗಳನ್ನು ಉಲ್ಲಂಘಿಸಿದಲ್ಲಿ ಸಂಬಂಧಿಸಿದವರ ವಿರುದ್ಧ ರಾಷ್ಟ್ರೀಯ ವಿಪತ್ತು ನಿರ್ವಹಣಾ ಕಾಯ್ದೆ 2005 ರ ನಿಯಮಗಳಂತೆ ಕಠಿಣ ಕ್ರಮ ಕೈಕೊಳ್ಳಲಾಗುವುದು.

10. ಶ್ರೀ ದೇವಾಲಯದ ಸುತ್ತ ಮುತ್ತಲಿನ ಆವರಣದಲ್ಲಿ ಹಾಗೂ 80 ಫೀಟ್ ರಸ್ತೆ ಮತ್ತು ಬಳಿಗಾರ ಪೇಟೆ ಪ್ರದೇಶಗಳಲ್ಲಿ ಯಾವುದೇ ರೀತಿಯ ಅಂಗಡಿ ಮುಗಟ್ಟುಗಳನ್ನು ಪ್ರಾರಂಭಿಸತಕ್ಕದ್ದಲ್ಲ.

11. ಈ ಹಿಂದಿನಿಂದಲೂ ವ್ಯಾಪಾರ ನಡೆಸುತ್ತಿದ್ದ ಅಂಗಡಿ ಮುಗ್ಗಟ್ಟುಗಳಿಗೆ ದೇವಾಲಯದ ವತಿಯಿಂದ ರಿಂಗ್ ರೋಡ ಪ್ರದೇಶದಲ್ಲಿ ಕಲ್ಪಿಸಲಾದ ಸ್ಥಳಾವಕಾಶದಲ್ಲಿ ಪ್ರಾರಂಭಿಸಲು ಮಾತ್ರ ಅವಕಾಶ ಕಲ್ಪಿಸಲಾಗಿದೆ.

12. ದೇವಾಲಯದ ಪ್ರವೇಶದ ಪೂರ್ವ ಮತ್ತು ಪಶ್ಚಿಮ ಭಾಗಗಳಲ್ಲಿ ನಿಗಧಿಪಡಿಸಿದ ಚೆಕ್ ಪೋಸ್ಟಗಳ ಹತ್ತಿರದಲ್ಲಿ ನಿಗಧಿಪಡಿಸಿದ ಪಾರ್ಕಿಂಗ್ ಪ್ರದೇಶದಲ್ಲಿಯೇ ಎಲ್ಲ ತರಹದ ವಾಹನಗಳನ್ನು ನಿಲುಗಡೆ ಮಾಡಲು ಪೋಲೀಸ್ ಇಲಾಖೆಯ ಸಹಯೋಗದೊಂದಿಗೆ ಕಟ್ಟು ನಿಟ್ಟಿನ ಕ್ರಮ ಕೈಕೊಳ್ಳುವುದು.

13. ದರ್ಶನಕ್ಕೆ ಮುಕ್ತಗೊಳಿಸಿದ ತರುವಾಯ ಮಾರ್ಗಸೂಚಿಗಳ ಉಲ್ಲಂಘನೆ ಕಂಡುಬಂದಲ್ಲಿ, ಸದರಿ ಆದೇಶವನ್ನು ರದ್ದುಪಡಿಸಲಾಗುವುದು.

14. ಶ್ರೀ ದೇವಿಯ ದರ್ಶನಕ್ಕೆ ಮುಕ್ತಗೊಳಿಸಿದ ತರುವಾಯ ಅವಶ್ಯವಿದ್ದಲ್ಲಿ ಪರಿಸ್ಥಿತಿ ಅವಲೋಕನೆಯಿಂದ ಯಾವುದೇ ಹೆಚ್ಚುವರಿ ಷರತ್ತುಗಳನ್ನು ವಿಧಿಸಲಾಗುವುದು.

15. ಶ್ರೀ ದೇವಿಯ ದರ್ಶನದ ವ್ಯವಸ್ಥೆಗೆ ತಾಲ್ಲೂಕು ಆಡಳಿತ ಹಾಗೂ ಪೋಲೀಸ್ ಇಲಾಖೆಯು ಸಂಪೂರ್ಣವಾಗಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಹಕರಿಸತಕ್ಕದ್ದು.

16. ಕಾರ್ಯನಿರ್ವಾಹಕ ಅಧಿಕಾರಿಗಳು ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಯಲ್ಲಮ್ಮನಗುಡ್ಡ, ತಾ: ಸವದತ್ತಿ ರವರು ದರ್ಶನಕ್ಕೆ ಆಗಮಿಸತಕ್ಕಂತಹ ಭಕ್ತಾಧಿಗಳಿಗೆ ಸರಾಗ ದರ್ಶನಕ್ಕಾಗಿ ಅವಶ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

22/7/2021

(ಎಂ.ಜಿ.ಹಿರೇಮಠ, ಭಾ.ಆ.ಸೇ.,)
ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಹಾಗೂ
ಜಿಲ್ಲಾಧಿಕಾರಿ ಮತ್ತು ಜಿಲ್ಲಾದಂಡಾಧಿಕಾರಿ,
ಬೆಳಗಾವಿ ಜಿಲ್ಲೆ, ಬೆಳಗಾವಿ

**ಪ್ರತಿ: ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ಬೆಳಗಾವಿ.
2. ಜಿಲ್ಲಾ ಪೋಲೀಸ್ ಅಧೀಕ್ಷಕರು, ಬೆಳಗಾವಿ ಜಿಲ್ಲೆ, ಬೆಳಗಾವಿ.
3. ಕಾರ್ಯನಿರ್ವಾಹಕ ಅಧಿಕಾರಿಗಳು ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಯಲ್ಲಮ್ಮನಗುಡ್ಡ, ತಾ: ಸವದತ್ತಿ
4. ಉಪವಿಭಾಗಾಧಿಕಾರಿ ಬೈಲಹೊಂಗಲ
5. ಪೋಲೀಸ್ ಉಪ ಅಧೀಕ್ಷಕರು ರಾಮದುರ್ಗ ಉಪ ವಿಭಾಗ
6. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಬೆಳಗಾವಿ ರವರು
   2/- ದೇವಾಲಯದ ಆಡಳಿತ ಹಾಗೂ ಪೋಲೀಸ್ ಇಲಾಖೆ ನಿಗಧಿಪಡಿಸಲಾದ ಚೆಕ್ ಪೋಸ್ಟ್‌ಗಳಿಗೆ ಕೋವಿಡ್ ಪರೀಕ್ಷೆಗೆ ಅಗತ್ಯ ವಿರುವ ವೈದ್ಯಕೀಯ ಸಿಬ್ಬಂಧಿಗಳನ್ನು ಒದಗಿಸಲು ತಿಳಿಸಲಾಗಿದೆ.
7. ಸಹಾಯಕ ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ ಬೆಳಗಾವಿ
8. ತಹಶೀಲ್ದಾರ ಸವದತ್ತಿ
9. ತಾಲ್ಲೂಕು ಆರೋಗ್ಯಾಧಿಕಾರಿಗಳು ಸವದತ್ತಿ ರವರಿಗೆ
10. ಹಿರಿಯ ಸಹಾಯಕ ನಿರ್ದೇಶಕರು ವಾರ್ತಾ ಇಲಾಖೆ, ಬೆಳಗಾವಿ.

2- ಈ ಆದೇಶದ ವಿವರಗಳನ್ನು ಜಿಲ್ಲೆಯ ಎಲ್ಲಾ ಮಾಧ್ಯಮದ ಎಲ್ಲಾ ವರ್ತಮಾನ ಪತ್ರಿಕೆಗಳಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಉಚಿತವಾಗಿ ಪ್ರಕಟಿಸಲು ಸೂಚಿಸಿದೆ.

ಅಪರ ಜಿಲ್ಲಾದಂಡಾಧಿಕಾರಿ
ಬೆಳಗಾವಿ ಜಿಲ್ಲೆ, ಬೆಳಗಾವಿ

Scanned by CamScanner